ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		756 (788)
ಸದಸ್ಯರ ಹೆಸರು		ಡಾ: ತಳವಾರ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ		20-12-2021
ಉತ್ತರಿಸಬೇಕಾದ ಸಚಿವರು		ಉನ್ನತ ಶಿಕ್ಷಣ ಸಚಿವರು
ಪ್ರಶ್ನೆ		ಉತ್ತರ
ಅ)	ಅನುದಾನಿತ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಖಾಲಿ ಇರುವ 133 ಹುದ್ದೆಗಳಿಗೆ ಹಣಕಾಸು ಇಲಾಖೆಯಿಂದ 2019ರಲ್ಲಿ ಅನುಮತಿ ನೀಡಿ ನೇಮಕಾತಿ ಪ್ರಕ್ರಿಯೆ ತಡೆಹಿಡಿಯಲು ಕಾರಣಗಳೇನು;	ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ವಿವಿಧ ಕಾರಣಗಳಿಂದ ತೆರವಾಗಿರುವ ಬೋಧಕರ ಖಾಲಿ ಹುದ್ದೆಗಳನ್ನು ಕೆಲವೊಂದು ಷರತ್ತಿಗೊಳಪಡಿಸಿ, ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014, ದಿನಾಂಕ:01-09-2017 ರಲ್ಲಿ ಸರ್ಕಾರವು ಅನುಮತಿ ನೀಡಿರುತ್ತದೆ. ಅದರಂತೆ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮಕೈಗೊಳ್ಳಲಾಗುತ್ತಿತ್ತು. ಈ ಮಧ್ಯೆ, ಕೋವಿಡ್-19ರ ಹಿನ್ನಲೆಯಲ್ಲಿ ಆರ್ಥಿಕ ಮಿತವ್ಯಯ ಆದೇಶ ಜಾರಿಯಾದ ಹಿನ್ನೆಲೆಯಲ್ಲಿ ಸದರಿ 133 ಹುದ್ದೆಗಳ ಭರ್ತಿಗೆ ಇಲಾಖಾವತಿಯಿಂದ ಕ್ರಮ ಕೈಗೊಂಡಿರುವುದಿಲ್ಲ.
ಆ)	ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣವಧಿ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರ ವಯೋಮಿತಿ ಮೀರುತ್ತಿರುವುದರಿಂದ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದೇ;	ನೇಮಕಾತಿಯ ವಿವಿಧ ಹಂತಗಳಲ್ಲಿ ಬಾಕಿ ಇರುವ ಒಟ್ಟಾರೆ-933 ಖಾಲಿ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಪ್ರಸ್ತುತ ಜಾರಿಯಲ್ಲಿರುವ ಆರ್ಥಿಕ ಮಿತವ್ಯಯ ಆದೇಶಗಳನ್ನು ತೆರವುಗೊಳಿಸಿ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರಸ್ತುತ ನೇಮಕಾತಿ ಪ್ರಕ್ರಿಯೆಗಾಗಿ ಬಾಕಿ ಇರುವ ಒಟ್ಟು 933 ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಗೆ ಆರ್ಥಿಕ ಇಲಾಖೆಯ ಸಹಮತಿ ನಿರೀಕ್ಷಿಸಿದೆ.
ಇ)	ಈಗಾಗಲೇ ವಯೋಮಿತಿ ಮೀರಿರುವ ಪೂರ್ಣಾವಧಿ ಉಪನ್ಯಾಸಕರಿಗೆ ಅವಕಾಶ ಮಾಡಿಕೊಡಲಾಗುವುದೇ?	ಸರ್ಕಾರದ ಆದೇಶ ಸಂಖ್ಯೆ:ಇಡಿ 49 ಯುಪಿಸಿ 2018, ದಿನಾಂಕ:20-06-2018 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿ ನಿಯಮಗಳಲ್ಲಿ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳಿಗೆ ಅಂದರೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷ, ಇತರೆ ಹಿಂದುಳಿದ ಅಭ್ಯರ್ಥಿಗಳಿಗೆ 43 ವರ್ಷ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಅಭ್ಯರ್ಥಿಗಳಿಗೆ 45 ವರ್ಷಗಳ ಗರಿಷ್ಠ ವಯೋಮಿತಿಯನ್ನು ನಿಗಧಿಪಡಿಸಲಾಗಿದ್ದು, ಸೇರ್ಪಡೆ ಆದೇಶ ಸಂಖ್ಯೆ:ಇಡಿ 87 ಯುಪಿಸಿ 2016, ದಿನಾಂಕ:13-12-2018

		ರನ್ವಯ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯನ್ನು ನಿಗಧಿಪಡಿಸುವುದರೊಂದಿಗೆ ಅವರು ಬೋಧನಾ ಅನುಭವ ಹೊಂದಿರುವ ಸೇವಾ ಅವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲಾಗುತ್ತಿದೆ. ಈಗಾಗಲೇ ಅಭ್ಯರ್ಥಿಗಳ ನೇರ ನೇಮಕಾತಿಗೆ ಗರಿಷ್ಠ ವಯೋಮಿತಿ ನಿಗಧಿಪಡಿಸಿರುವುದರಿಂದ, ವಯೋಮಿತಿ ಸಡಿಲಿಕೆಯ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಇಡಿ 157 ಯುಪಿಸಿ 2021

(ಡಾ: ಅಶ್ವತ್ಥ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ